**All India Radio: Bangalore**
**Regional Bulletin In Kannada**
**24.04.2025 / 6.40 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

***************

ಮುಖ್ಯಾಂಶಗಳು

೧. ಮೈಸೂರು ವಿಭಾಗದಲ್ಲಿ ೩ ಸಾವಿರದ ೬೪೭ ಕೋಟಿ ರೂಪಾಯಿ ಮೊತ್ತದ ಯೋಜನೆಗಳಿಗೆ ಸಂಪುಟ ಸಭೆಯಲ್ಲಿ ಅನುಮೋದನೆ

೨. ಮಲೆ ಮಹದೇಶ್ವರ ಬೆಟ್ಟ ಇನ್ನು ಪಾನಮುಕ್ತ - ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ

೩. ಕಾಶ್ಮೀರದ ಪಹಲ್ಗಾಮ್ ಭಯೋತ್ಪಾದನಾ ದಾಳಿ ವಿರುದ್ಧ ಖಂಡನಾ ನಿರ್ಣಯ ಕೈಗೊಂಡ ಸಂಪುಟ ಸಭೆ

೪. ಬೆಂಗಳೂರಿನ ಇನ್ಸ್ಟೆಮ್ ಪ್ರಯೋಗಾಲಯದ ಕಾರ್ಯವೈಖರಿ ಪರಿಶೀಲನೆ ನಡೆಸಿದ ಕೇಂದ್ರ ಸಚಿವ ಜಿತೇಂದ್ರ ಸಿಂಗ್

೫. ಬೆಂಗಳೂರಿನಲ್ಲಿ ಬಿಬಿಎಂಪಿ ಅನುಮತಿ ಇಲ್ಲದೇ ಜಾಹಿರಾತು ಪ್ರದರ್ಶನಕ್ಕೆ ನಿಷೇಧ

***************

ಚಾಮರಾಜನಗರದ ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಮೈಸೂರು ವಿಭಾಗದಲ್ಲಿ ೩ ಸಾವಿರದ ೬೪೭ ಕೋಟಿ ೪೨ ಲಕ್ಷ ರೂಪಾಯಿ ಮೌಲ್ಯದ ಕಾಮಗಾರಿಗೆ ಅಂಗೀಕಾರ ದೊರೆತಿದೆ. ಸಂಪುಟ ಸಭೆಯ ಬಳಿಕ ಸುದ್ದಿಗೋಷ್ಠಿ ನಡೆಸಿ, ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಳಗಾವಿ ವಿಭಾಗದ ಸಂಪುಟ ಸಭೆ ಬಿಜಾಪುರದಲ್ಲಿ, ಬೆಂಗಳೂರು ವಿಭಾಗದ ಸಭೆ ನಂದಿ ಬೆಟ್ಟದಲ್ಲಿ ನಡೆಯಲಿದೆ ಎಂದು ತಿಳಿಸಿದ್ದಾರೆ.

ಧ್ವನಿ ಮುಖ್ಯಮಂತ್ರಿ ಸಿದ್ದರಾಮಯ್ಯ

ಮಾನವ-ಪ್ರಾಣಿ ಸಂಘರ್ಷ ತಡೆಯಲು ೨೧೦ ಕೋಟಿ ರೂಪಾಯಿ ವೆಚ್ಚದಲ್ಲಿ ರೈಲ್ವೇ ಬ್ಯಾರಿಕೇಡ್ ಪೂರ್ಣಗೊಳಿಸಲು ನಿರ್ಧರಿಸಲಾಗಿದೆ. ಕುಡಿಯುವ ನೀರಿಗಾಗಿ ೩೧೫ ಕೋಟಿ, ಆರೋಗ್ಯ

ಸುಧಾರಣೆಗೆ ೨೨೮ ಕೋಟಿ, ಕೊಳ್ಳೇಗಾಲದಲ್ಲಿ ಜಿಲ್ಲಾ ಆಸ್ಪತ್ರೆ ನಿರ್ಮಾಣಕ್ಕೆ ಸಂಪುಟ ಅಂಗೀಕಾರ ನೀಡಿದೆ. ಹನೂರಿನಲ್ಲಿ ತಾಲ್ಲೂಕು ಆಸ್ಪತ್ರೆ ಹಾಗೂ ತಾಲೂಕು ಭವನ ನಿರ್ಮಾಣ ಮಾಡಲು ಅನುಮೋದನೆ ನೀಡಲಾಗಿದೆ. ಮೈಸೂರಿನ ವರುಣಾದ ಇಳಿಯಾಲದಲ್ಲಿ ಅಂತಾರಾಷ್ಟ್ರೀಯ ಕ್ರೀಡಾಂಗಣಕ್ಕೆ ಜಾಗ ಕೊಡಲು ಅಂಗೀಕಾರ ದೊರೆತಿದೆ ಎಂದು ವಿವರಿಸಿದ್ದಾರೆ.

ಗುಂಡ್ಲುಪೇಟೆಯಲ್ಲಿ ೧೧೦ ಕೆರೆಗಳಿಗೆ ನೀರು ತುಂಬಿಸಲು ೪೭೫ ಕೋಟಿ, ಚಾಮರಾಜನಗರದಲ್ಲಿ ಕ್ರೀಡಾಂಗಣ ನಿರ್ಮಾಣಕ್ಕೆ ೧೫ ಕೋಟಿ ನೀಡಲು ತೀರ್ಮಾನಿಸಲಾಗಿದೆ.

****************

ಮಲೈ ಮಹದೇಶ್ವರ ಬೆಟ್ಟ ಇನ್ನು ಮುಂದೆ ಪಾನ ಮುಕ್ತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ. ಮುಖ್ಯಮಂತ್ರಿ ಸಿದ್ಧರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಮಲೈ ಮಹದೇಶ್ವರಸ್ವಾಮಿ ಅಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ಹಿಂದಿನ ಪ್ರಾಧಿಕಾರದ ಸಭೆಯಲ್ಲಿ ತೆಗೆದುಕೊಂಡ ನಿರ್ಣಯಗಳು ಒಂದೂವರೆ ವರ್ಷದಿಂದ ಜಾರಿ ಆಗದೇ ಇರುವುದಕ್ಕೆ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಪ್ರಾಧಿಕಾರದ ಕೆಲಸ ಕಾರ್ಯಗಳು, ಕಾಮಗಾರಿಗಳು ಸೂಕ್ತವಾಗಿ, ವೇಗವಾಗಿ ನಡೆಯಲು ಒಬ್ಬ ಂಇಇ ಯನ್ನು ಪ್ರಾಧಿಕಾರಕ್ಕೇ ನೇಮಿಸುವಂತೆ ಸೂಚಿಸಿದರು.

ಪ್ರಾಧಿಕಾರದಲ್ಲಿ ಕಾರ್ಯ ನಿರ್ವಹಿಸುವ ೬೬ ಕಾರ್ಮಿಕ ಕುಟುಂಬಗಳಿಗೆ ತಲಾ ೨೦ ಲಕ್ಷ ವೆಚ್ಚದಲ್ಲಿ, ಒಟ್ಟು ೧೨ ರಿಂದ ೧೩ ಕೋಟಿ ವೆಚ್ಚದಲ್ಲಿ ಆದಷ್ಟು ಬೇಗ ನೂತನ ಮನೆ ಕಟ್ಟಿ ಕೊಡಲು ಸಭೆ ನಿರ್ಣಯ ಕೈಗೊಳ್ಳಲಾಗಿದೆ.

****************

ಜಮ್ಮು ಕಾಶ್ಮೀರದಲ್ಲಿ ನಡೆದ ಭಯೋತ್ಪಾದನೆ ದಾಳಿ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸಂಪುಟ ಸಭೆಯಲ್ಲಿ ಖಂಡನಾ ನಿರ್ಣಯ ಕೈಗೊಳ್ಳಲಾಗಿದೆ. ಭಯೋತ್ಪಾದಕರ ದಾಳಿಗಳು ಮನುಷ್ಯ ಕುಲದ ಮೇಲೆ ನಡೆಸುತ್ತಿರುವ ಭೀಬತ್ಸ ಕೃತ್ಯಗಳು ಎಂದು ತೀರ್ಮಾನಿಸಬೇಕು. ಎಲ್ಲ ರೀತಿಯ ಉಗ್ರವಾದವನ್ನು ಬುಡಸಮೇತ ಕಿತ್ತು ಹಾಕಲು ಇಡೀ ದೇಶ ಒಂದಾಗಿ ನಿಂತು ಶ್ರಮಿಸಬೇಕು. ಈ ಘಟನೆಗೆ ಕಾರಣವಾಗಿರುವ ವೈಫಲ್ಯಗಳ ಕುರಿತು ಸಮರ್ಥವಾಗಿ ಮತ್ತು ಸಮರ್ಪಕ ತನಿಖೆ ನಡೆಸಬೇಕು ಎಂದು ಆಗ್ರಹಿಸಲು ತೀರ್ಮಾನಿಸಲಾಯಿತು,

ಮುಂದೆ ಈ ರೀತಿಯ ಯಾವುದೇ ಘಟನೆಗಳು ನಡೆಯದಂತೆ ಎಚ್ಚರಿಕೆ ವಹಿಸಬೇಕು ಎಂದು ರಾಜ್ಯ ಸರ್ಕಾರ ಒತ್ತಾಯಿಸಿದೆ.

***************

ಪಹಲ್ಗಾಮ್‌ನಲ್ಲಿ ಭಯೋತ್ಪಾದಕರ ದಾಳಿಗೆ ಬಲಿಯಾದ ಮಂಜುನಾಥ್ ಅಂತ್ಯ ಸಂಸ್ಕಾರ ಶಿವಮೊಗ್ಗದಲ್ಲಿ ನಡೆಯಿತು. ಬೆಂಗಳೂರಿನ ಹೆಬ್ಬಾಳ ಚಿತಾಗಾರದಲ್ಲಿ  ಭರತ್ ಭೂಷಣ್ ಅಂತಿಮ ಸಂಸ್ಕಾರ ನಡೆಯಿತು.

ಭರತ್ ಭೂಷಣ್ ಪಾರ್ಥಿವ ಶರೀರವನ್ನು ಮತ್ತಿಕೆರೆಯ ಅವರ ನಿವಾಸದಲ್ಲಿ ಬೆಳಗ್ಗೆ ಸಾರ್ವಜನಿಕ ದರ್ಶನಕ್ಕೆ ಇಡಲಾಗಿತ್ತು. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಕೇಂದ್ರ ಸಚಿವ ವಿ. ಸೋಮಣ್ಣ, ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವ ರಾಮಲಿಂಗಾರೆಡ್ಡಿ ಸೇರಿದಂತೆ ಹಲವು ಗಣ್ಯರು ಭೇಟಿ ನೀಡಿ ಗೌರವ ನಮನ ಸಲ್ಲಿಸಿದರು.

ಶಿವಮೊಗ್ಗದಲ್ಲಿ ಮಂಜುನಾಥ್ ಅಂತ್ಯ ಸಂಸ್ಕಾರ ಸಂದರ್ಭದಲ್ಲಿ ಸಚಿವ ಮಧು ಬಂಗಾರಪ್ಪ ಸೇರಿದಂತೆ ಹಲವು ಗಣ್ಯರು ಪಾಲ್ಗೊಂಡಿದ್ದರು.

***************

ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ಕೃತ್ಯವನ್ನು ಕೇಂದ್ರ ರೈಲ್ವೆ ಖಾತೆ ಸಚಿವ ವಿ. ಸೋಮಣ್ಣ ಖಂಡಿಸಿದ್ದಾರೆ. ಹಾಸನದಲ್ಲಿಂದು  ಸುದ್ದಿಗಾರರೊಂದಿಗೆ ಮಾತಾಡಿದ ಅವರು, ಭಯೋತ್ಪಾದಕರಿಗೆ  ತಕ್ಕ ಉತ್ತರ ನೀಡಲು ಪ್ರಧಾನಿಯವರು ನಿರ್ಧರಿಸಿದ್ದಾರೆ ಎಂದು ತಿಳಿಸಿದ್ದಾರೆ.

ಧ್ವನಿ - ವಿ ಸೋಮಣ್ಣ

***************

ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಇಂದು ಬೆಂಗಳೂರಿನಲ್ಲಿ ಇನ್ಸ್ಟಿಟ್ಯೂಟ್ ಆಫ್ ಸ್ಟೆಮ್ ಸೆಲ್ ಸೈನ್ಸ್ ಅಂಡ್ ರಿಜನರೇಷನ್ ಮೆಡಿಸಿನ್ ನ ಕಾರ್ಯವೈಖರಿಯನ್ನು ಪರಿಶೀಲಿಸಿದರು.

ಇನ್‌ಸ್ಟೆಮ್ ಬಯೋಸೇಫ್ಟಿ ಲೆವೆಲ್ ೩ ಪ್ರಯೋಗಾಲಯ ಹಾಗೂ ಭ್ರೂಣಶಾಸ್ತ್ರದಲ್ಲಿನ ಸಂಶೋಧನೆ, ಮತ್ತು ತರಬೇತಿ ಕೇಂದ್ರದ ಬಗ್ಗೆಯೂ ಸಚಿವರಿಗೆ ವಿವರಿಸಲಾಯಿತು.

ಇದು ಜೈವಿಕ ಸುರಕ್ಷತಾ ಪ್ರಯೋಗಾಲಯವು ಹೆಚ್ಚಿನ ಅಪಾಯಕಾರಿ ರೋಗಕಾರಕಗಳನ್ನು ಒಳಗೊಂಡ ಸಾಂಕ್ರಾಮಿಕ ರೋಗಗಳನ್ನು ಪತ್ತೆಹಚ್ಚಲು ಕೇಂದ್ರ ಸರ್ಕಾರದ ರಾಷ್ಟ್ರೀಯ ಏಕ ಆರೋಗ್ಯ ಅಭಿಯಾನದ ಭಾಗವಾಗಿದೆ.

ಈ ಪ್ರಯೋಗಾಲಯವು ದೀರ್ಘಾವಧಿಯಲ್ಲಿ ಮಾನವ ಕಾಂಡಕೋಶದಿಂದ ಪಡೆದ ಜೀವಕೋಶಗಳನ್ನು ಬಳಸಿಕೊಂಡು ಸೋಂಕು ಮತ್ತು ರೋಗ ಮಾದರಿಯನ್ನು ಪತ್ತೆ ಹಚ್ಚಲಿದೆ. ಇದು ಮುಂದುವರಿದ ಸಂತಾನೋತ್ಪತ್ತಿ ವಿಜ್ಞಾನದಲ್ಲಿ ಸಂಶೋಧಕರಿಗೆ ತರಬೇತಿ ನೀಡಲಿದೆ. ಆರ್ಗನಾಯ್ಡ್‌ಗಳನ್ನು ಉತ್ಪಾದಿಸಲು ಹೊಸ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸಲಿದೆ.

ಬಳಿಕ ಮಾತನಾಡಿದ ಸಚಿವ ಡಾ. ಜಿತೇಂದ್ರ ಸಿಂಗ್, ಅತ್ಯಾಧುನಿಕ ಸೌಲಭ್ಯಗಳನ್ನು ಹೊಂದಿರುವ ಇಂತಹ ಸಂಸ್ಥೆಗಳು ಜೈವಿಕ ತಂತ್ರಜ್ಞಾನದಲ್ಲಿ ಕ್ರಾಂತಿಯನ್ನು ತರಲಿವೆ ಎಂದು ಹೇಳಿದ್ದಾರೆ. ರೋಗಗಳಿಗೆ ಪರಿಹಾರವನ್ನು ಕಂಡುಕೊಳ್ಳುವುದರ ಜೊತೆಗೆ ಆರ್ಥಿಕತೆಯ ಬೆಳವಣಿಗೆಗೆ ಸಹಾಯ ಮಾಡಲಿದೆ ಅಭಿಪ್ರಾಯಪಟ್ಟಿದ್ದಾರೆ. ಇದೇ ವೇಳೆ ವೈದ್ಯಕೀಯ ವೃತ್ತಿಪರರನ್ನು ಆಹ್ವಾನಿಸುವಂತೆ ಸ್ಟೆಮ್ ಸೆಲ್ ವಿಜ್ಞಾನ ಸಂಸ್ಥೆಗೆ ಸಲಹೆ ನೀಡಿದ್ದಾರೆ.

****************

ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿನ ಯಾವುದೇ ಕಟ್ಟಡ, ಗೋಡೆ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಮುಖ್ಯ ಆಯುಕ್ತರ ಲಿಖಿತ ಅನುಮತಿಯಿಲ್ಲದೆ ಯಾವುದೇ ರೀತಿಯ ಜಾಹೀರಾತು ಪ್ರದರ್ಶಿಸುವುದನ್ನು ನಿಷೇಧಿಸಲಾಗಿದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಆದೇಶ ಹೊರಡಿಸಿದ್ದಾರೆ.

ವಲಯ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಅಳವಡಿಸಲಾಗಿರುವ ಅಥವಾ ಅಳವಡಿಸುವ ಫ್ಲೆಕ್ಸ್, ಬ್ಯಾನರ್, ಕಟೌಟ್ ಹಾಗೂ ಇನ್ನಿತರೆ ಜಾಹೀರಾತು ಪ್ರದರ್ಶನಗಳನ್ನು ತೆರುವಗೊಳಿಸಲು, ಮಾರ್ಷಲ್ಸ್ ಮತ್ತು ಇಂಜಿನಿಯರ್ ಗಳ ತಂಡವನ್ನು ವಲಯ ಆಯುಕ್ತರು ರಚಿಸತಕ್ಕದ್ದು ಎಂದು ತಿಳಿಸಿದ್ದಾರೆ.

****************

೧.	ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ೧೩೪ನೇ ಜನ್ಮ ದಿನೋತ್ಸವವನ್ನು ಇದೇ ೨೮ ರಂದು ಬೆಂಗಳೂರಿನ ದೂರದರ್ಶನ ಕೇಂದ್ರದಲ್ಲಿ ಆಚರಿಸಲಾಗುತ್ತಿದೆ. ಕಾರ್ಯಕ್ರಮವನ್ನು ಕೆಜಿಎಫ್ ಶಾಸಕಿ ರೂಪಕಲಾ ಎಂ.ಶಶಿಧರ್ ಉದ್ಘಾಟಿಸಲಿದ್ದಾರೆ.

೨.	ಆಕಾಶವಾಣಿ ಬೆಂಗಳೂರು ಕೇಂದ್ರದ ಮುಖ್ಯವಾಹಿನಿಯಲ್ಲಿ ಸಾಂದರ್ಭಿಕ ಕರಾರಿನ ಮೇರೆಗೆ ಉದ್ಘೋಷಕರಾಗಿ ಕಾರ್ಯ ನಿರ್ವಹಿಸಲು ಆಸಕ್ತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಸಾಮಾನ್ಯ ಅಭ್ಯರ್ಥಿಗಳು ೩೫೨ ರೂಪಾಯಿ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ೨೬೬ ರೂಪಾಯಿ ನಿಗದಿತ ಶುಲ್ಕ ಸಂದಾಯ ಮಾಡಿ ಪರೀಕ್ಷೆಗೆ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಬೇಕಾದ ವಿಳಾಸ : ನಿಲಯ ನಿರ್ದೇಶಕರು, ಕಾರ್ಯಕ್ರಮ ಸಮನ್ವಯ ವಿಭಾಗ, ಆಕಾಶವಾಣಿ, ಪ್ರಸಾರ ಭಾರತಿ, ರಾಜಭವನ ರಸ್ತೆ, ಬೆಂಗಳೂರು - ೫೬೦೦೦೧. ಅರ್ಜಿ ಸಲ್ಲಿಕೆಗೆ ಮೇ ೨೩ ಕೊನೆಯ ದಿನವಾಗಿದೆ.

***************

ವರನಟ, ಪದ್ಮಭೂಷಣ ಡಾ.ರಾಜ್‌ಕುಮಾರ್ ಅವರ ೯೭ನೇ ಜನ್ಮ ದಿನಾಚರಣೆಯನ್ನು ರಾಜ್ಯಾದ್ಯಂತ ಆಚರಿಸಲಾಯಿತು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಡಾ.ರಾಜ್‌ಕುಮಾರ್ ಅವರ  ಜನ್ಮ ದಿನಾಚರಣೆಯನ್ನು ಕನ್ನಡ ಅಭಿಮಾನದ ದಿನವನ್ನಾಗಿ ಆಚರಣೆ ಮಾಡಲಾಯಿತು.

ವರನಟ ಡಾ. ರಾಜಕುಮಾರ್ ಕರ್ನಾಟಕ ಮಾತ್ರವಲ್ಲದೇ ಇಡೀ ದೇಶದ ಹೆಮ್ಮೆಯಾಗಿದ್ದರು ಎಂದು ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅಭಿಪ್ರಾಯಪಟ್ಟಿದ್ದಾರೆ.

ಆಡು ಮುಟ್ಟದ ಸೊಪ್ಪಿಲ್ಲ ಎಂಬ ನಾಣ್ಣುಡಿಯಂತೆ ಡಾ.ರಾಜ್ ಕುಮಾರ್ ನಟಿಸದೇ ಇರುವ ಪಾತ್ರವೇ ಇಲ್ಲ. ಅವರು ಕನ್ನಡದ ಆಸ್ತಿ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಬಣ್ಣಿಸಿದ್ದಾರೆ.

ವರನಟ  ಡಾ. ರಾಜಕುಮಾರ ಅವರು ಕಲೆಗಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟಿದ್ದರು ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದ್ದಾರೆ.

ವರನಟ ಡಾ.ರಾಜ್ ಕುಮಾರ್ ಅವರಂತೆ ಆದರ್ಶಗುಣ ಹಾಗೂ ಅಭಿನಯ ಚಾತುರ್ಯವನ್ನು ಇಂದಿನ ಯುವಜನಾಂಗ ಬೆಳೆಸಿಕೊಳ್ಳುವಂತೆ ಯಾದಗಿರಿ ಸರಕಾರಿ ಪದವಿ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಸುಭಾಶ್ಚಂದ್ರ ಕೌಲಗಿ ತಿಳಿಸಿದ್ದಾರೆ.

********ಮುಕ್ತಾಯ********